**ಸೌದಿ ಅರೇಬಿಯಾ ಮತ್ತು ಪಾಕಿಸ್ತಾನದ ನಡುವೆ ಕಾರ್ಯತಂತ್ರದ ಪರಸ್ಪರ ರಕ್ಷಣಾ ಒಪ್ಪಂದಕ್ಕೆ ಸಹಿ ಹಾಕುವ ವರದಿಗಳ ಕುರಿತ ಮಾಧ್ಯಮ ಪ್ರಶ್ನೆಗಳಿಗೆ ಅಧಿಕೃತ ವಕ್ತಾರರ ಪ್ರತಿಕ್ರಿಯೆ**

ಸೆಪ್ಟೆಂಬರ್ 18, 2025

ಮಾಧ್ಯಮ ಪ್ರಶ್ನೆಗೆ ಉತ್ತರವಾಗಿ, ಅಧಿಕೃತ ವಕ್ತಾರ ಶ್ರೀ ರಣಧೀರ್ ಜೈಸ್ವಾಲ್ ಹೀಗೆ ಪ್ರತಿಕ್ರಿಯಿಸಿದ್ದಾರೆ:

ಸೌದಿ ಅರೇಬಿಯಾ ಮತ್ತು ಪಾಕಿಸ್ತಾನ ನಡುವೆ ಕಾರ್ಯತಂತ್ರದ ಪರಸ್ಪರ ರಕ್ಷಣಾ ಒಪ್ಪಂದಕ್ಕೆ ಸಹಿ ಹಾಕುವ ವರದಿಗಳನ್ನು ನಾವು ನೋಡಿದ್ದೇವೆ.

ಎರಡೂ ದೇಶಗಳ ನಡುವಿನ ದೀರ್ಘಕಾಲದ ಒಪ್ಪಂದವನ್ನು ಔಪಚಾರಿಕಗೊಳಿಸುವ ಈ ಬೆಳವಣಿಗೆಯು ಪರಿಗಣನೆಯಲ್ಲಿದೆ ಎಂಬುದು ಸರ್ಕಾರಕ್ಕೆ ತಿಳಿದಿತ್ತು.

ನಮ್ಮ ರಾಷ್ಟ್ರೀಯ ಭದ್ರತೆ ಹಾಗೂ ಪ್ರಾದೇಶಿಕ ಮತ್ತು ಜಾಗತಿಕ ಸ್ಥಿರತೆಯ ಮೇಲೆ ಈ ಬೆಳವಣಿಗೆಯು ಬೀರಬಹುದಾದ ಪರಿಣಾಮಗಳನ್ನು ನಾವು ಅಧ್ಯಯನ ಮಾಡುತ್ತೇವೆ. ಭಾರತದ ರಾಷ್ಟ್ರೀಯ ಹಿತಾಸಕ್ತಿಗಳನ್ನು ರಕ್ಷಿಸಲು ಮತ್ತು ಎಲ್ಲ ಕ್ಷೇತ್ರಗಳಲ್ಲಿ ಸಮಗ್ರ ರಾಷ್ಟ್ರೀಯ ಭದ್ರತೆಯನ್ನು ಖಚಿತಪಡಿಸಿಕೊಳ್ಳಲು ಸರ್ಕಾರ ಬದ್ಧವಾಗಿದೆ.

ನವ ದೆಹಲಿ

ಸೆಪ್ಟೆಂಬರ್ 18, 2025